ಮುಖ್ಯಕಾರ್ಯನಿರ್ವಹಣಾಧಿಕಾರಿಗಳು
ಹಾಗೂ ಕಾರ್ಯದರ್ಶಿಗಳು
ಕರ್ನಾಟಕ ರಾಜ್ಯ ಕಟ್ಟಡ ಮತ್ತು
ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

ಕಲ್ಯಾಣ ಸುರಕ್ಷಾ ಭವನ, ಐಟಿಐ ಕಾಲೇಜು ಆವರಣ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029.
ಕಛೇರಿ: 080-29753350
karbuildworkerswelfare@gmail.com

ಸಂಖ್ಯೆ: ಕಕಾಮಂ/ನೋಂದಣಿ/ಸಿಆರ್-01/2021-22

ದಿನಾಂಕ:04-10-2021

# ಕಛೇರಿ ಆದೇಶ

ವಿಷಯ: ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ಹಾಗೂ ಕರ್ನಾಟಕ ನಿಯಮಗಳು 2006 ರಡಿ ಫಲಾನುಭವಿಗಳ ನೋಂದಣಿಯ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸಮ ಸಂಖ್ಯೆಯ ಕಛೇರಿ ಆದೇಶ ದಿನಾಂಕ 21-9-2021 ಮತ್ತು 22-09-2021

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಕಛೇರಿ ಆದೇಶಗಳನ್ನು ಮುಂದುವರೆಸುತ್ತಾ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ನೋಂದಣಿಗೆ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದ್ದು, ರಾಜ್ಯಾದ್ಯಂತ ಕಾರ್ಮಿಕರು ನೋಂದಣಿಗಾಗಿ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆ. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ಹಾಗೂ ಕರ್ನಾಟಕ ನಿಯಮಗಳು 2006 ರಡಿ ಮಂಡಳಿಯಿಂದ ನೀಡಲಾಗುತ್ತಿರುವ ವಿವಿಧ ಧನಸಹಾಯದ ಸೌಲಭ್ಯಗಳನ್ನು ಪಡೆಯಲು ಮಂಡಳಿಯಲ್ಲಿ ನೋಂದಾಯಿಸುವುದು ಅಗತ್ಯವಾಗಿರುತ್ತದೆ.

ಆದರೆ, ಇತ್ತೀಚ್ಚಿನ ದಿನಗಳ ನೋಂದಣಿ ಅರ್ಜಿಗಳ ಅಂಕಿ ಅಂಶಗಳನ್ನು ಕೂಲಂಕುಶವಾಗಿ ಪರಿಶೀಲಿಸಲಾಗಿ ತಂತ್ರಾಂಶದಲ್ಲಿ ಸಲ್ಲಿಸಲಾಗುತ್ತಿರುವ ಅರ್ಜಿಗಳ ಸಂಖ್ಯೆಯಲ್ಲಿ ಅಸಾಮಾನ್ಯ ಹೆಚ್ಚಳವು ಕಂಡು ಬಂದಿರುತ್ತದೆ. ಕಳೆದ 20 ದಿನಗಳಲ್ಲಿ 2,08,313 ಅರ್ಜಿಗಳು ತಂತ್ರಾಂಶದಲ್ಲಿ ಸ್ವೀಕೃತವಾಗಿದ್ದು, ಇದರಲ್ಲಿ 1,24,252 ಅರ್ಜಿಗಳು ಅಂದರೆ ಶೇ.60 ರಷ್ಟು ಅರ್ಜಿಗಳನ್ನು ಸೇವಾ ಸಿಂಧು ತಂತ್ರಾಂಶದ ಮೂಲಕ ಸಲ್ಲಿಸಲಾಗಿರುತ್ತದೆ.

ಎಲ್ಲಾ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಒಳಪಡಿಸಿ ಮಂಡಳಿಯ ಸೌಲಭ್ಯಗಳನ್ನು ಅವರಿಗೂ ಕೂಡ ವಿಸ್ತರಿಸಬೇಕು ಎನ್ನುವುದು ಮಂಡಳಿಯ ಉದ್ದೇಶವಾಗಿರುತ್ತದೆ. ಆದರೂ ಕೂಡ ಅನರ್ಹ ಫಲಾನುಭವಿಗಳು ನೋಂದಣಿಯಾದಲ್ಲಿ ಮಂಡಳಿಯ ಸೆಸ್ ನಿಧಿಯ ದುರ್ಬಳಕೆಯಾಗುವುದಲ್ಲದೆ ಅರ್ಹ ಫಲಾನುಭವಿಗಳು ಸೌಲಭ್ಯಗಳಿಂದ ವಂಚಿತರಾಗುವ ಸಂಭವವಿರುತ್ತದೆ.

ಈ ಹಿನ್ನಲೆಯಲ್ಲಿ ನೋಂದಣಾಧಿಕಾರಿಗಳಾದ ಎಲ್ಲಾ ಕಾರ್ಮಿಕ ನಿರೀಕ್ಷಕರು ಮತ್ತು ಹಿರಿಯ ಕಾರ್ಮಿಕ ನಿರೀಕ್ಷಕರು ತಮ್ಮ ಕಾರ್ಯವ್ಯಾಪ್ತಿಯಲ್ಲಿ ನೋಂದಣಿ ಅರ್ಜಿಗಳನ್ನು ವಿಲೇವಾರಿ ಮಾಡುವಾಗ ವೈಯುಕ್ತಿಕ ಗಮನಹರಿಸಿ ಪ್ರತಿಯೊಂದು ಅರ್ಜಿಯನ್ನು ಕೂಲಂಕುಶವಾಗಿ ಪರಿಶೀಲಿಸಿ ಅವಶ್ಯಕವಿದ್ದಲ್ಲಿ ಸ್ಥಳ ಪರಿಶೀಲನೆ ಅಥವಾ ದೂರವಾಣಿ ಮೂಲಕ ಪರಿಶೀಲನೆ ನಡೆಸಿ ಅರ್ಜಿಗಳ ನಿಖರತೆ ಮತ್ತು ಸತ್ಯಾಸತ್ಯತೆಯನ್ನು ಖಾತರಿಪಡಿಸಿಕೊಂಡು ವಿಲೇವಾರಿ ಮಾಡಲು ಸೂಚಿಸಲಾಗಿದೆ. ಅನರ್ಹ